# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 538 |
| ಸದಸ್ಯರ ಹೆಸರು | : | ಶ್ರೀ ಮುನಿರಾಜು ಗೌಡ ಪಿ.ಎಂ. (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 22.12.2022 |
| ಉತ್ತರಿಸುವವರು | : | ಮಾನ್ಯ ಮುಖ್ಯಮಂತ್ರಿಯವರು. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಇ-ಸ್ವತ್ತು ಖಾತಾ ವಿತರಣೆಗೆ ಇರುವ ಪ್ರಕ್ರಿಯೆಯೇನು; ಇದರಲ್ಲಿ ಗ್ರಾಮ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಮತ್ತು ಜಿಲ್ಲಾ ಪಂಚಾಯಿತಿಯ ಪಾತ್ರವೇನು; | ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಕ್ರಮಬದ್ಧ ಆಸ್ತಿಗಳಿಗೆ ಇ-ಸ್ವತ್ತು ತಂತ್ರಾಂಶದ ಮೂಲಕ ನಮೂನೆ-9 ಮತ್ತು 11ಎ ಯನ್ನು ಪಡೆಯಲು ಆಸ್ತಿಯ ಮಾಲೀಕರು ಆಸ್ತಿಗೆ ಸಂಬಂಧಿಸಿದ ದಾಖಲೆಗಳನ್ನು ಒದಗಿಸಿದಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಯು ಡಿಜಿಟಲ್ ಸಹಿಯ ಮೂಲಕ ನಮೂನೆ-9 ಮತ್ತು 11ಎ ವಿತರಿಸುತ್ತಾರೆ.<br><br>ಕ್ರಮಬದ್ಧವಲ್ಲದ ಆಸ್ತಿಗಳಿಗೆ ಇ-ಸ್ವತ್ತು ತಂತ್ರಾಂಶದ ಮೂಲಕ ನಮೂನೆ 11ಬಿ ಯನ್ನು ಪಡೆಯಲು ಆಸ್ತಿಯ ಮಾಲೀಕರು ಆಸ್ತಿಗೆ ಸಂಬಂಧಿಸಿದ ದಾಖಲೆಗಳನ್ನು ಒದಗಿಸಿದಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಯು ಡಿಜಿಟಲ್ ಸಹಿಯ ಮೂಲಕ ನಮೂನೆ 11ಬಿ ವಿತರಿಸುತ್ತಾರೆ.<br><br>ಉತ್ತರ ಕನ್ನಡ, ದಕ್ಷಿಣ ಕನ್ನಡ, ಉಡುಪಿ, ಶಿವಮೊಗ್ಗ, ಚಿಕ್ಕಮಗಳೂರು ಮತ್ತು ಕೊಡಗು ಜಿಲ್ಲೆಗಳಿಗೆ ಇ-ಸ್ವತ್ತು ತಂತ್ರಾಂಶದ ಮೂಲಕ ವಿತರಿಸುವುದಕ್ಕೆ ವಿನಾಯಿತಿ ನೀಡಿ ನಮೂನೆ 11ಬಿ ಯನ್ನು ಕೈಬರಹದ ಮೂಲಕ ನೀಡಲು ಅವಕಾಶ ಕಲ್ಪಿಸಲಾಗಿದೆ.<br><br>ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಯು ತೆರಿಗೆ ನಿರ್ಧರಣೆ ಪಟ್ಟಿಗಳಲ್ಲಿ ತಪ್ಪಾಗಿ ನಮೂದಾಗಿದ್ದಲ್ಲಿ ತಿದ್ದುಪಡಿ ಮಾಡಲು ಮತ್ತು ನಿಯಮಬಾಹಿರವಾಗಿ ವಿತರಿಸಿದಲ್ಲಿ ರದ್ದು ಮಾಡಲು ಅವಕಾಶ ಕಲ್ಪಿಸಲಾಗಿದೆ.<br><br>ಇ-ಸ್ವತ್ತು ವಿತರಣೆಯಲ್ಲಿ ಜಿಲ್ಲಾ ಪಂಚಾಯತಿಯ ಪಾತ್ರ ಇರುವುದಿಲ್ಲ. |

| | | |
|---|---|---|
| (ಆ) | ರಾಜ್ಯದ ಹಲವು ತಾಲ್ಲೂಕು ಪಂಚಾಯಿತಿಗಳಲ್ಲಿ ಕಾರ್ಯನಿರ್ವಾಹಕ ಅಧಿಕಾರಿಗಳು ಕಾನೂನುಬಾಹಿರವಾಗಿ ಲಾಗಿನ್ ಸೃಷ್ಟಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಎಷ್ಟು ತಾಲ್ಲೂಕುಗಳಲ್ಲಿ ಇ-ಸ್ವತ್ತು ವಿತರಣೆಗಾಗಿ ಕಾರ್ಯನಿರ್ವಾಹಕ ಅಧಿಕಾರಿಗಳ ಲಾಗಿನ್ ಸೃಷ್ಟಿಸಿಕೊಳ್ಳಲಾಗಿದೆ; ಯಾವ ಆದೇಶದ ಮೇಲೆ ಈ ರೀತಿ ಲಾಗಿನ್ ಸೃಷ್ಟಿ ಮಾಡಲಾಗಿದೆ; | ಬಂದಿಲ್ಲ.<br><br>ಆದಾಗ್ಯೂ, ಪ್ರಸ್ತುತ ಇ-ಸ್ವತ್ತು ತಂತ್ರಾಂಶ ಜಾರಿಗೆ ಬಂದ ನಂತರ ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 25 ಅಮುಕಾ 2015, ದಿನಾಂಕ: 06-10-2015 ರಲ್ಲಿ ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ರಾಮನಗರ ಮತ್ತು ಕೋಲಾರ ಜಿಲ್ಲೆಗಳಲ್ಲಿ ಕಾನೂನುಬಾಹಿರವಾಗಿ ಇ-ಸ್ವತ್ತು ತಂತ್ರಾಂಶದ ಮೂಲಕ ನಮೂನೆ-11ಬಿ ವಿತರಿಸಲಾಗಿರುವ ಪ್ರಕರಣಗಳು ಬೆಳಕಿಗೆ ಬಂದಿರುವುದರಿಂದ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ, ಬೆಂಗಳೂರು ಅಂತರ್ ರಾಷ್ಟ್ರೀಯ ವಿಮಾನ ನಿಲ್ದಾಣ ಪ್ರಾಧಿಕಾರ, ರಾಮನಗರ ಚನ್ನಪಟ್ಟಣ ಪ್ರಾಧಿಕಾರ, ನೆಲಮಂಗಲ ಯೋಜನಾ ಪ್ರಾಧಿಕಾರ, ಮಾಗಡಿ ಸ್ಥಳೀಯ ಯೋಜನಾ ಪ್ರಾಧಿಕಾರ, ಹೊಸಕೋಟೆ ಸ್ಥಳೀಯ ಯೋಜನಾ ಪ್ರಾಧಿಕಾರ, ಆನೇಕಲ್ ಸ್ಥಳೀಯ ಯೋಜನಾ ಪ್ರಾಧಿಕಾರ, ಬೆಂಗಳೂರು- ಮೈಸೂರು ಮೂಲ ಸೌಕರ್ಯ ಕಾರಿಡಾರ್ ಪ್ರದೇಶದ ಯೋಜನಾ ಪ್ರಾಧಿಕಾರ ಮತ್ತು ಬೆಂಗಳೂರು ಸುತ್ತಲಿನ ಸ್ಥಳೀಯ ಯೋಜನಾ ಪ್ರಾಧಿಕಾರಿಗಳ ವ್ಯಾಪ್ತಿಯಲ್ಲಿರುವ ಪ್ರದೇಶಗಳಿಗೆ ಸಂಬಂಧಿಸಿದಂತೆ ಗ್ರಾಮ ಪಂಚಾಯತಿಗಳು ಹೊಸದಾಗಿ ನಮೂನೆ-9, 11ಎ ಮತ್ತು 11ಬಿ ನೀಡಬೇಕಾದರೆ ಇ-ಸ್ವತ್ತು ತಂತ್ರಾಂಶದ ಮೂಲಕ ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಯವರು ಅನುಮೋದನೆ ನೀಡಿದ ನಂತರ ನಮೂನೆ-9, 11ಎ ಮತ್ತು 11ಬಿ ವಿತರಿಸಲು ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಕ್ರಮ ವಹಿಸುವಂತೆ ತಿಳಿಸಿದೆ. |
| (ಇ) | ಈ ರೀತಿ ನಿಯಮಬಾಹಿರವಾಗಿ ಲಾಗಿನ್ ಸೃಷ್ಟಿ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು? | |

ಸಂಖ್ಯೆ: ಗ್ರಾಅಪ 361 ಗ್ರಾಪಂಅ 2022

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ